ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014-15 ದಿನಾಂಕ: 23-09-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | 1965 ರ ಯುದ್ಧದಲ್ಲಿ ಪಾಲ್ಗೊಂಡ ಆಯ್ದ ಸೈನಿಕರಿಗೆ ಸನ್ಮಾನ:<br>ಸಂಪರ್ಕ:<br>ಕರ್ನಲ್ ಎಸ್.ಬಿ. ಕೊನ್ನೂರ್<br>ಮೊಬೈಲ್ : 9535737531 | 24-9-2015<br>ಗುರುವಾರ<br>ಅಪರಾಹ್ನ<br>12-00 ಗಂಟೆಗೆ | ಸಿ.ಎಂ.ಪಿ. ಸೆಂಟರ್ ಮತ್ತು ಸ್ಕೂಲ್,<br>ಹೊಸೂರು ರಸ್ತೆ,<br>ಬೆಂಗಳೂರು |
| 2 | ಬೌರಿಂಗ್ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ಹಾಗೂ ಮಾಧ್ಯಮ ಭೇಟಿ:<br>ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು<br>ಸಂಪರ್ಕ: ಡಾ: ಎಂ.ಎಸ್. ಸಂಗಾಪುರ, ಕಾರ್ಯದರ್ಶಿ,<br>ದೂರವಾಣಿ: 22240445 / 6 | 24-9-2015<br>ಗುರುವಾರ<br>ಮಧ್ಯಾಹ್ನ<br>1-00 ಗಂಟೆಗೆ | ಬೌರಿಂಗ್ ಆಸ್ಪತ್ರೆ,<br>ಲೇಡಿ ಕರ್ಜನ್ ರಸ್ತೆ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

# ಸೇನಾನಿಗಳಿಗೆ ಸನ್ಮಾನ

ಬೆಂಗಳೂರು, ಸೆಪ್ಟೆಂಬರ್ 23 (ಕರ್ನಾಟಕ ವಾರ್ತೆ)

1965 ರಲ್ಲಿ ಪಾಕಿಸ್ತಾನ ವಿರುದ್ಧದ ಸಮರದಲ್ಲಿ ಭಾರತ ದೇಶದ ಪರವಾಗಿ ಹೋರಾಡಿ ಭಾರತಕ್ಕೆ ವಿಜಯೋತ್ಸವ ಮೂಡಿಸಿದ ವೀರ ಸೇನಾನಿಗಳಿಗೆ ಮತ್ತು ಸಮರದಲ್ಲಿ ಮೃತಪಟ್ಟ ಸೇನಾನಿಗಳ ವಿಧವೆಯರಿಗೆ ಅವರ ದೇಶತ್ಯಾಗವನ್ನು ಸ್ಮರಿಸಿ ಗೌರವಿಸುವ, ಸನ್ಮಾನಿಸುವ ಕಾರ್ಯಕ್ರಮವನ್ನು ಬೆಂಗಳೂರಿನ ಹೊಸೂರು ರಸ್ತೆಯ ಸಿಎಂಪಿ ಕೇಂದ್ರ ಮತ್ತು ಶಾಲೆಯಲ್ಲಿ ಸೆಪ್ಟೆಂಬರ್ 24 ರಂದು ಬೆಳಿಗ್ಗೆ 11-30 ಗಂಟೆಗೆ ಏರ್ಪಡಿಸಲಾಗಿದೆ ಎಂದು ಕಮಾಂಡೆಂಟ್ ಕರ್ನಲ್ ಎಸ್.ಬಿ. ಕೊಣ್ಣೂರ್ ಅವರು ತಿಳಿಸಿದ್ದಾರೆ.

ಪಲ್ಲವಿ:ಬಾಬು:ಕೆಎಂ

## ಮಾರುಕಟ್ಟೆ ಮೌಲ್ಯ ಮಾರ್ಗಸೂಚಿ ತಾತ್ಕಾಲಿಕ ಪಟ್ಟಿ

ಬೆಂಗಳೂರು, ಸೆಪ್ಟೆಂಬರ್ 23 (ಕರ್ನಾಟಕ ವಾರ್ತೆ)

ಬೆಂಗಳೂರು ನಗರದ ಜಿಲ್ಲಾ ಉಪನೋಂದಣಿ ಕಛೇರಿಗಳ ವ್ಯಾಪ್ತಿಯಲ್ಲಿ ಬರುವ ಸ್ಥಿರಾಸ್ತಿಗಳ ನೋಂದಣಿಗಾಗಿ ಅಂದಾಜು ಮಾರುಕಟ್ಟೆ ಮೌಲ್ಯದ ಮಾರ್ಗಸೂಚಿ ದರಗಳ ತಾತ್ಕಾಲಿಕ ಪಟ್ಟಿಯನ್ನು ದಿನಾಂಕ: 14-09-2015 ರ ಕರ್ನಾಟಕ ರಾಜ್ಯ ಸರ್ಕಾರದ ವಿಶೇಷ ರಾಜ್ಯ ಪತ್ರದಲ್ಲಿ (Extraordinary Gazette) ಪ್ರಕಟಿಸಲಾಗಿದೆ. ತಾತ್ಕಾಲಿಕ ಮಾರ್ಗಸೂಚಿ ದರಗಳನ್ನು ವೆಬ್‌ಸೈಟ್ ವಿಳಾಸ: www.karunadu.gov.in/karigr ರಲ್ಲಿ ಅಳವಡಿಸಲಾಗಿದ್ದು, ಸಾರ್ವಜನಿಕರು ಈ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿವಸಗಳೊಳಗಾಗಿ ಸದಸ್ಯ ಕಾರ್ಯದರ್ಶಿಗಳು ಕೇಂದ್ರ ಮೌಲ್ಯಮಾಪನ ಹಾಗೂ ನೋಂದಣಿ ಮಹಾಪರಿವೀಕ್ಷಕರು, ಕೇಂದ್ರ ಮೌಲ್ಯ ಮಾಪನ ಸಮಿತಿ ಇವರಿಗೆ ಮೇಲೆ ತಿಳಸಿದ ವಿಳಾಸಕ್ಕೆ ಅಂಚೆ ಮೂಲಕವಾಗಲೀ, ಖುದ್ದಾಗಿಯಾಗಲೀ ಅಥವಾ ಇ-ಮೇಲ್ ವಿಳಾಸಕ್ಕೆ cvcobjections2015@gmail.com ಗೆ ಕಳುಹಿಸಲು ತಿಳಸಲಾಗಿದೆ.

ಪಲ್ಲವಿ/ಬಾಬು/ಕೆಎಂ

## ಶಿಲಾಶಾಸನಗಳು ನಮ್ಮ ಇತಿಹಾಸ ಪರಂಪರೆ ಪ್ರತಿಬಿಂಬಿಸುವ ಪಳೆಯುಳಿಕೆಗಳು: ಸಚಿವೆ ಉಮಾಶ್ರೀ

ಬೆಂಗಳೂರು, ಸೆಪ್ಟೆಂಬರ್ 23 (ಕರ್ನಾಟಕ ವಾರ್ತೆ)

ನಮ್ಮ ದೇಶದ ಇತಿಹಾಸ, ಪರಂಪರೆಯನ್ನು ಪ್ರತಿಬಂಬಿಸುವ ಪಳೆಯುಳಿಕೆಗಳಾಗಿ ಶಿಲಾಶಾಸನಗಳು ನಮ್ಮ ಮುಂದಿದ್ದು, ಅವುಗಳನ್ನು ಜತನದಿಂದ ಸಂರಕ್ಷಿಸುವ ಕಾರ್ಯ ಆಗಬೇಕಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಉಮಾಶ್ರೀ ಅವರು ಕರೆ ನೀಡಿದರು.

ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ಕಸ್ತೂರಬಾ ರಸ್ತೆಯ ವೆಂಕಟಪ್ಪ ಕಲಾ ಗ್ಯಾಲರಿ ಆವರಣದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಬೆಂಗಳೂರು ಸರ್ಕಾರಿ ವಸ್ತುಸಂಗ್ರಹಾಲಯದ ೧೫೦ನೇ ವರ್ಷಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ಇತಿಹಾಸವನ್ನು ಒಮ್ಮೆ ಅವಲೋಕಿಸಿದಲ್ಲಿ ಬೇರೆಲ್ಲರಿಗಿಂತ ಉತ್ತಮವಾದ ವಿಭಿನ್ನ ಸಂಸ್ಕೃತಿ ಮತ್ತು ಪರಂಪರೆಯನ್ನು ನಾವು ಕಾಣಬಹುದಾಗಿದೆ ಎಂದು ತಿಳಿಸಿದರು.

ಆದರೆ ವೈಜ್ಞಾನಿಕ ಬೆಳವಣಿಗೆಗಳು ನಮ್ಮ ಪರಂಪರೆ ಸಂಸ್ಕೃತಿಯನ್ನು ಎಲ್ಲೋ ಒಂದು ಕಡೆ ಆಕ್ರಮಿಸಿಕೊಳ್ಳುವಂತೆ ಭಾಸವಾಗುತ್ತಿದೆ ಎಂದ ಸಚಿವರು , ವೈಜ್ಞಾನಿಕ ಬೆಳವಣಿಗೆ ಜೊತೆ ಜೊತೆಗೆ ನಮ್ಮ ಸಂಸ್ಕೃತಿ ಪರಂಪರೆಯನ್ನು ಉಳಿಸಿ ಬೆಳೆಸುವ ಮಹತ್ತರ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ಮುಂದಿನ ಪೀಳಿಗೆಗೆ ವಿಜ್ಞಾನದ ಜೊತೆ ಜೊತೆಗೆ ನಮ್ಮ ಇತಿಹಾಸ ಪರಂಪರೆಯನ್ನು ಉಳಿಸಿಕೊಡುವ ಮಹತ್ತರ ಜವಾಬ್ದಾರಿ ಪುರಾತತ್ವ ಮತ್ತು ಪರಂಪರೆ ಇಲಾಖೆಯ ಮೇಲಿದೆ ಎಂದ ಅವರು , ವಸ್ತು ಸಂಗ್ರಹಾಲಯದ ೧೫೦ನೇ ವರ್ಷಾಚರಣೆಯನ್ನು ದೊಡ್ಡ ಮಟ್ಟದಲ್ಲಿ ಸರ್ಕಾರದ ವತಿಯಿಂದ ಆಚರಿಸಬೇಕಿದ್ದು ಈ ಸಂಬಂಧ ಕಾರ್ಯಕ್ರಮದ ರೂಪುರೇಷೆಯನ್ನು ರೂಪಿಸಿ ತಮ್ಮೊಂದಿಗೆ ಚರ್ಚಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸಚಿವರು ಈ ಸಂದರ್ಭ ಸೂಚಿಸಿದರು.

ಶಾಲಾ ಮಕ್ಕಳ ಶೈಕ್ಷಣಿಕ ಪ್ರವಾಸ ಸಂದರ್ಭಗಳಲ್ಲಿ ಇತಿಹಾಸ ಪ್ರಜ್ಞೆ ಮೂಡಿಸುವ ಸಲುವಾಗಿ 'ಪ್ರಾಚ್ಯ-ಪ್ರಜ್ಞ' ಯೋಜನೆಯನ್ನು ಜಾರಿಗೆ ತರಲಾಯಿತು. ಮಕ್ಕಳಿಗೆ ತಾವು ನೋಡಿದಂತಹ ಐತಿಹಾಸಿಕ ಸ್ಥಳಗಳ ಬಗ್ಗೆ ರಸಪ್ರಶ್ನೆ,ಪ್ರಶ್ನಾವಳಿ ಮುಂತಾದ ಕಾರ್ಯಕ್ರಮ ಏರ್ಪಡಿಸುವ ಮೂಲಕ ಅವರಿಗೆ ಇತಿಹಾಸದ ಬಗ್ಗೆ ಸ್ಪಷ್ಟ ಆಳವಾದ ಜ್ಞಾನ ಮೂಡಿಸುವುದು ಯೋಜನೆಯ ಉದ್ದೇಶ ಎಂದರು.

ವಸ್ತು ಸಂಗ್ರಹಾಲಯಗಳಿಗೆ ಹೆಚ್ಚು ಒತ್ತು ನೀಡಬೇಕು ಎಂದ ಸಚಿವರು , ಪತ್ರಗಾರ, ಪ್ರಾಚ್ಯವಸ್ತು, ಮತ್ತು ಪರಂಪರೆ ಇಲಾಖೆಗೆ ಕಾಯಕಲ್ಪ ನೀಡುವ ಸಂಬಂಧ ಇತಿಹಾಸ ತಜ್ಞರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರೊಂದಿಗೆ ಚರ್ಚಿಸಿ ರೂಪುರೇಷೆ ಸಿದ್ಧಪಡಿಸಲಾಗವುದು ಎಂದರು.

ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ ಕಾರ್ಯದರ್ಶಿಗಳಾದ ಬಿ.ಜಿ ನಂದಕುಮಾರ್ ಅವರು ಮಾತನಾಡಿ, ನಮ್ಮ ಪರಂಪರೆ ವಿಶ್ವದಲ್ಲೇ ಅತ್ಯಂತ ಶ್ರೇಷ್ಠವಾಗಿದ್ದು, ಬಹಳ ಪುರಾತನವಾದ ಪರಂಪರೆಯನ್ನು ನಾವುಗಳು ಹೊಂದಿದ್ದೇವೆ ಎಂದರು.

ಕಾರ್ಯಕ್ರಮದಲ್ಲಿ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ಪ್ರಾದೇಶಿಕ ನಿರ್ದೇಶಕರಾದ ಡಾ. ಸತ್ಯಭಾಮ ಬದರೀನಾಥ್, ಪುರಾತ್ವತ ಅಧೀಕ್ಷಕರಾದ ಡಾ. ಅರುಣ್‌ರಾಜ್ ಮುಂತಾದವರು ಉಪಸ್ಥಿತರಿದ್ದರು.

ಪಲ್ಲವಿ/ಮಮತ/

ಛಾಯಾಚಿತ್ರ ಶೀರ್ಷಿಕೆ:

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಐಸೋಲ್ ಹಾಗೂ ದರೇಸ ಪಬ್ಲಿಕೇಷನ್ಸ್ ಸಂಸ್ಥೆಗಳು ಹಮ್ಮಿಕೊಂಡಿದ್ದ " ನೆಲ, ಜಲ, ನುಡಿ-ನಮ್ಮ ಜೀವನಾಡಿ" ಕಾರ್ಯಾಗಾರವನ್ನು ಕನ್ನಡ, ಸಂಸ್ಕೃತಿ

ಹಾಗೂ ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ ಕಾರ್ಯದರ್ಶಿ ಬಿ. ಜಿ. ನಂದಕುಮಾರ್ ಅವರು ಇಂದು ಬೆಂಗಳೂರಿನಲ್ಲಿ ಉದ್ಘಾಟಿಸಿದರು. ಈ ಕಾರ್ಯಾಗಾರದಲ್ಲಿ ಸುರೇಶ್ ಮಾನೆ ಪ್ರಾಸ್ತಾವಿಕವಾಗಿ ಮಾತನಾಡಿದರು.